ಪೈನುಗಾರಿಕೆ : ಕಳೆದು ಒಂದು ವರ್ಷದಿಂದ ಹೊಸ ಮಿಶ್ರ ತಳಿಗಳನ್ನು ತಂದು ಅಕಳು ಉತ್ಪಾದನೆ ಮತ್ತು ಇತರೆ ವಿಚಾರವಾಗಿ ಸಂಶೋಧನೆ ಮಾಡಲಾಗುತ್ತಿದೆ.

ರೇಷ್ಮೆ ಬೆಳೆಗಳ ಬಗ್ಗೆ : ಹೆಚ್ಚಿನ ಸಂಶೋಧನೆ ಹಾಗೂ ಅಭಿವೃದ್ಧಿ ಕೈಗೊಳ್ಳಲು ಯೋಜನೆಯನ್ನು ರೂಪಿಸಲಾಗುತ್ತಿದೆ.

ಗದಗ ಮತ್ತು ಹಾವೇರಿಯನ್ನು ಜಿಲ್ಲೆಗಳೆಂದು ಘೋಷಣೆ

3523 - ಶ್ರೀ ಪಿ.ಸಿ. ಸಿದ್ದನಗೌಡರ್ (ಕಲಘಟಗಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗದ್ದಿಗೌಡರ್ ಸಮಿತಿಯನ್ನು ವರದಿಯನ್ನು ಸರ್ಕಾರ ಒಪ್ಪಿದೆಯೇ?

ಆ) ಹಾಗಿದ್ದಲ್ಲಿ ಆ ವರದಿಯನ್ನು ಅನುಷ್ಠಾನಗೊಳಿಸಲು ಒಪ್ಪಿದೆಯೇ? ಸರ್ಕಾರ ಯಾವುದಾದರೂ ಕಾರ್ಯಕ್ರಮಗಳನ್ನು ಹಾಕಿಕೊಂಡಿದೆಯೇ?

ಇ) ಗದಗ ಮತ್ತು ಹಾವೇರಿಯನ್ನು ಜಿಲ್ಲೆಗಳೆಂದು ಘೋಷಣೆ ಮಾಡುವ ಬಗ್ಗೆ ಸರ್ಕಾರ ಪರಿಶೀಲಿಸುತ್ತಿದೆಯೆ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು)

ಅ) ಪರಿಶೀಲನೆಯಲ್ಲಿದೆ.

ಆ) ಇವರ ವರದಿ ಉಳಿದ ವರದಿಗಳ ಜೊತೆಯಲ್ಲಿ ತೀವ್ರ ಪರಿಶೀಲನೆಯಲ್ಲಿದೆ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಹೊಳಲ್ಕೆರೆ ತಾಲ್ಲೂಕಿನಲ್ಲಿರುವ ಅಮೃತ್ ಮಹಲ್ ಕಾವಲಿನ ವಿಸ್ತೀರ್ಣ

3527 - ಶ್ರೀ ಎ.ವಿ. ಉಮಾಪತಿ, (ಹೊಳಲ್ಕೆರೆ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಳಲ್ಕೆರೆ ತಾಲ್ಲೂಕಿನಲ್ಲಿರುವ ಅಮೃತ್ ಕಾವಲ್‌ನ ಒಟ್ಟು ವಿಸ್ತೀರ್ಣವೆಷ್ಟು?

ಆ) ಈ ಪೈಕಿ ಎಷ್ಟು ಎಕರೆ ಪ್ರದೇಶ ಬಿಡುಗಡೆಯಾಗಿದೆ?

ಇ) ಈ ಪ್ರದೇಶವನ್ನು ಕಂದಾಯ ಇಲಾಖೆಗೆ ಬಿಟ್ಟು ಕೊಡಲಾಗಿದೆಯೇ?

ಈ) ಹಾಗಿದ್ದಲ್ಲಿ, ಎಷ್ಟು ಎಕರೆ ಪ್ರದೇಶವನ್ನು ಕಂದಾಯ ಇಲಾಖೆಗೆ ಬಿಟ್ಟುಕೊಡಲಾಗಿದೆ?

ಉ) ಬಿಡುಗಡೆ ಆಗಿದ್ದಲ್ಲಿ, ಆ ಜಮೀನನ್ನು ಬಡವರಿಗೆ ಹರಿಜನರಿಗೆ ಹಂಚಲು ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು)

ಅ) 9,363 ಎಕರೆಗಳು 18 ಗುಂಟೆಗಳು.

ಆ) 200 ಎಕರೆಗಳು

ಇ) ಪ್ರಶ್ನೆ ಉದ್ಭವಿಸುವುದಿಲ್ಲ

ಈ) 200 ಎಕರೆಗಳು

ಉ) 1969ರ ಕರ್ನಾಟಕ ಭೂ ಮಂಜೂರಾತಿ ನಿಯಮಗಳಂತೆ ಅರ್ಹ ವ್ಯಕ್ತಿಗಳಿಗೆ ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ.

ಪಿತ್ರಾರ್ಜಿತ ಆಸ್ತಿಯ ಬಗ್ಗೆ

3528 - ಶ್ರೀ ಎ.ವಿ. ಉಮಾಪತಿ (ಹೊಳಲ್ಕೆರೆ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಿತ್ರಾರ್ಜಿತ ಆಸ್ತಿಗಳನ್ನು ಪಾಲು ಮಾಡುವಾಗ ಸದರಿ ಜಮೀನಿನ